ಹೊಂದಿದ್ದಾರೆ ಎಂದರು. ಸಿಪಿಐ ಗೊಂಬಿಮಠ, ಮಮ್ಮದ್ ಇಬ್ರಾಹಿಂ
ಶಂಕರಗೌಡ ಪಾಟೀಲ್ ಮಾತನಾಡಿ ಮಾತನಾಡಿದರು ... ಎಸ್.ಐ
... ಸಿದರು.
... ರ್ಜುನ
... ಶಾಂತ
ಪುರಸಭೆಯವರು ಪುರಸಭೆ ವಂದಿಸಿದರು.

ಸಂಯುಕ್ತ ಕರ್ನಾಟಕ



ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗಾಗಿ ಸ್ವಾಗತ ಮತ್ತು ಶೈಕ್ಷಣಿಕ ವಿಕಸನ ಸಮಾರಂಭದಲ್ಲಿ ಕುಲಪತಿ ಪ್ರೊ. ಎಸ್. ಆರ್. ನಿರಂಜನ್ ಮಾತನಾಡಿದರು.

# 'ವ್ಯಸನಮುಕ್ತ ಜೀವನದಿಂದ ಶೈಕ್ಷಣಿಕ ಗುಣಮಟ್ಟ ವೃದ್ಧಿ'

ಕಲಬುರಗಿ: ಎಲ್ಲಾ ವಿದ್ಯಾರ್ಥಿಗಳಿಗೆ ಹೊಸ ಕೋರ್ಸುಗಳಿಗೆ ಸ್ವಾಗತಸುವುದರೊಂದಿಗೆ ಆದರ್ಶ ವಿದ್ಯಾರ್ಥಿಗಳಾಗಿ ತಮ್ಮ ಶೈಕ್ಷಣಿಕ ಶ್ರಯೋಭಿವೃದ್ಧಿ ಹೊಂದಬೇಕು. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸಂಯಮ, ಸಹಕಾರ, ಸಹಾನುಭೂತಿ ಬೆಳೆಸಿಕೊಳ್ಳಬೇಕಲ್ಲದೇ ತಮ್ಮ ಶೈಕ್ಷಣಿಕ ಜೀವನವನ್ನು ವ್ಯಸನ ಮುಕ್ತವಾಗಿ ಬೆಳಿಸಿಕೊಂಡರೆ ಭವಿಷ್ಯದಲ್ಲಿ ಯಶಸ್ಸು ಸಾಧಿಸಲು ಸಾಧ್ಯ ಎಂದು ಕಲಬುರಗಿ ವಿಶ್ವವಿದ್ಯಾಲಯ ಕುಲಪತಿ ಪ್ರೊ. ಎಸ್. ಆರ್. ನಿರಂಜನ್ ಹೇಳಿದರು.

ಇಲ್ಲಿನ ಕಲಬುರಗಿ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗಾಗಿ ಸ್ವಾಗತ ಮತ್ತು ಶೈಕ್ಷಣಿಕ ವಿಕಸನ ಸಮಾರಂಭದಲ್ಲಿ ಅವರು ಮಾತನಾಡಿದರು.

ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಪ್ರೊ. ಬಿ.ಎಸ್. ಮಹೇಶ್ವರಪ್ಪ ಮಾತನಾಡಿ, ವಿಶ್ವವಿದ್ಯಾಲಯದಲ್ಲಿ ಪ್ರಥಮ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಸೌಲಭ್ಯ ಹಾಗೂ ಶೈಕ್ಷಣಿಕ ಸೌಕರ್ಯಗಳ ಕುರಿತು ತಿಳಿಸಿದರು. ಇದೇ ಸಂದರ್ಭದಲ್ಲಿ ಕುಲಸಚಿವರು (ಮೌಲ್ಯಮಾಪನ) ಡಾ. ಸಿ. ಎಸ್. ಪಾಟೀಲ, ಎಸ್ ದಿವಾಕರ ಅವರು ವಿದ್ಯಾರ್ಥಿಗಳಿಗೆ ಹಿತವಚನ ನೀಡಿದರು. ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನ್ ಪ್ರೋ. ಎ. ವೆಂಕಟರಾವ್ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿದ್ಯಾರ್ಥಿ ಕಲ್ಯಾಣಾಧಿಕಾರಿ ಪ್ರೋ. ಕೆ. ಸಿದ್ದಪ್ಪ ಸ್ವಾಗತಿಸಿದರು. ರಾಷ್ಟ್ರೀಯ ಸೇವಾ ಯೋಜನೆಯ ಸಂಯೋಜಕ ಡಾ. ಎನ್. ಈ. ಕಣ್ಣೂರ ವಂದಿಸಿದರು. ಈ ಸಮಾರಂಭದಲ್ಲಿ ಪ್ರಥಮ ವರ್ಷದವಿದ್ಯಾರ್ಥಿಗಳು, ಪ್ರಾಧ್ಯಾಪಕರು ಉಪಸ್ಥಿತಿರಿದ್ದರು.

ಶನಿವಾರ, 3, ಸೆಪ್ಟೆಂಬರ್, 2016, ಕಲಬುರಗಿ

3/9/16
REGISTRAR
GULBARGA UNIVERSITY
GULBARGA.